<u>Akashvani : Bangalore</u>

<u>Regional Bulletin In Kannada</u>

<u>ಆಕಾಶವಾಣಿ ಬೆಂಗಳೂರು</u>

<u>ಪ್ರದೇಶ ಸಮಾಚಾರ</u>

22.06.2026 18.40 hrs

---

ಮುಖ್ಯಾಂಶಗಳು

- ಬಿಡದಿ ಟೌನ್‌ಶಿಪ್ ವಿಚಾರ; ಅಧಿವೇಶನದಲ್ಲಿ ಜೆಡಿಎಸ್ ನಾಯಕರು ಚರ್ಚೆ ನಡೆಸಲಿ- ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್
- ಕಂದಾಯ ಇಲಾಖೆಯಲ್ಲಿ ಖಾಲಿ ಹುದ್ದೆಗಳ ಭರ್ತಿ ಪ್ರಕ್ರಿಯೆ ಚುರುಕುಗೊಳಿಸುವಂತೆ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಸೂಚನೆ
- ಬೆಂಗಳೂರಿನಲ್ಲಿ ಆರು ತಿಂಗಳಲ್ಲಿ ವೈಟ್ ಟ್ಯಾಪಿಂಗ್ ಕಾಮಗಾರಿ ಮುಗಿಸುವಂತೆ ಅಧಿಕಾರಿಗಳಿಗೆ ಸಚಿವ ಕೃಷ್ಣಭೈರೇಗೌಡ ನಿರ್ದೇಶನ
- ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಕರ್ಯ ಅಭಿವೃದ್ಧಿ ನಿಗಮದಿಂದ ಸರ್ಕಾರಕ್ಕೆ ೧೪೩ ಕೋಟಿ ರೂಪಾಯಿ ಲಾಭಾಂಶ ಹಸ್ತಾಂತರ
- ಪದ್ಮಶ್ರೀ ಪುರಸ್ಕೃತ ಅಂಕೇಗೌಡರ ಸಂಗ್ರಹದ ಪುಸ್ತಕಗಳಿಗೆ ಸೂಕ್ತ ಕಟ್ಟಡ ವ್ಯವಸ್ಥೆ ಮಾಡುವಂತೆ ಅಧಿಕಾರಿಗಳಿಗೆ ಮುಖ್ಯಮಂತ್ರಿ ಸೂಚನೆ

---

ಬಿಡದಿ ಟೌನ್ ಶಿಪ್ ವಿಚಾರವಾಗಿ ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ ಪರವಾಗಿ ಜೆಡಿಎಸ್ ಶಾಸಕರು ಅಧಿವೇಶನದಲ್ಲಿ ಚರ್ಚೆ ಮಾಡಿದರೆ, ಉತ್ತರ ನೀಡಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕುಮಾರಸ್ವಾಮಿಯವರು, ಬೈರಮಂಗಲದಲ್ಲಿ ಚರ್ಚೆಗೆ ಆಹ್ವಾನಿಸಿದ್ದರ ಕುರಿತು ಪ್ರತಿಕ್ರಿಯಿಸಿ, ಮುಂದಿನ ಅಧಿವೇಶನದಲ್ಲಿ ಅನುಭವಿ ರಾಜಕಾರಣಿಗಳ ಮೂಲಕ ಚರ್ಚೆ ಮಾಡಿಸಲಿ ಎಂದು ಸವಾಲು ಹಾಕಿದ್ದಾರೆ.

---

ಕಂದಾಯ ಇಲಾಖೆಯ ಕಾರ್ಯಕ್ಷಮತೆ ಹೆಚ್ಚಿಸಲು ಸಹಾಯಕ ಆಯುಕ್ತರಿಗೆ ಹೆಚ್ಚಿನ ಜವಾಬ್ದಾರಿ ನೀಡಲಾಗುವುದು ಎಂದು ಉಪಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.

ವಿಧಾನಸೌಧದಲ್ಲಿ ಇಂದು ಕಂದಾಯ ಇಲಾಖೆಯ ವಿವಿಧ ಯೋಜನೆಗಳು, ಆಡಳಿತಾತ್ಮಕ ಪ್ರಗತಿ ಹಾಗೂ ಸಾರ್ವಜನಿಕ ಸೇವೆಗಳ ಅನುಷ್ಠಾನದ ಕುರಿತು ಅಧಿಕಾರಿಗಳೊಂದಿಗೆ ಸಭೆ ನಡೆಸಿ ಸಮಗ್ರ ಪರಿಶೀಲನೆ ನಡೆಸಿದ ಅವರು, ಬಾಕಿ ಉಳಿದಿರುವ ಕಡತಗಳನ್ನು ಶೀಘ್ರ ವಿಲೇವಾರಿ ಮಾಡುವಂತೆ ನಿರ್ದೇಶನ ನೀಡಿದ್ದಾರೆ.

ಭೂಮಾಪಕರ ಸಭೆ ಕರೆದು, ಅವರ ಬೇಡಿಕೆಗಳನ್ನು ಆಲಿಸಬೇಕು ಎಂದು ತಿಳಿಸಿದ್ದಾರೆ. ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ವೇಗಗೊಳಿಸಬೇಕು. ಅಧಿಕಾರಿ ಮತ್ತು ಸಿಬ್ಬಂದಿಗೆ ಬಡ್ತಿ ನೀಡುವ ಪ್ರಕ್ರಿಯೆಯಲ್ಲಿ ಯಾವುದೇ ರೀತಿಯ ವಿಳಂಬ ಉಂಟಾಗಬಾರದು. ಜೇಷ್ಠತಾ ಪಟ್ಟಿ ಶೀಘ್ರ ಪ್ರಕಟಿಸಿ, ನಿಯಮಾನುಸಾರ ಪಾರದರ್ಶಕವಾಗಿ ಬಡ್ತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕು ಎಂದು ಸೂಚಿಸಿದ್ದಾರೆ.

---

ಬೆಂಗಳೂರು ನಗರದ ಪ್ರಮುಖ ರಸ್ತೆಗಳ ಅಭಿವೃದ್ಧಿ ಹಾಗೂ ರಸ್ತೆ ಅಗಲೀಕರಣಕ್ಕೆ ಸಂಬಂಧಿಸಿದಂತೆ ಬಿ ಸ್ಮೈಲ್ ಅಧಿಕಾರಿಗಳ ಜೊತೆ ಜಿಬಿಎ ನಗರಾಭಿವೃದ್ಧಿ ಸಚಿವ ಕೃಷ್ಣಭೈರೇಗೌಡ ಸಭೆ ನಡೆಸಿದರು.

ಸಭೆಯಲ್ಲಿ ವೈಟ್ ಟಾಪಿಂಗ್, ಫ್ಲೈಓವರ್ ಸೇರಿದಂತೆ ಇತರ ಕಾಮಗಾರಿಗಳ ಸ್ಥಿತಿಗಳ ಬಗ್ಗೆ ಮಾಹಿತಿ ಪಡೆದುಕೊಂಡರು.

ಸಭೆಯಲ್ಲಿ ಎಲಿವೇಟೆಡ್ ಕಾರಿಡಾರ್ ಹಾಗೂ ಫ್ಲೈಓವರ್ ನಿರ್ಮಾಣವಾಗುತ್ತದೆ ಎಂದು ತಿಳಿದಿದ್ದರೂ ವೈಟ್ ಟಾಪಿಂಗ್ ಮಾಡುವುದು ಏಕೆ ಎಂದು ಅಧಿಕಾರಿಗಳನ್ನು ಸಚಿವರು ಪ್ರಶ್ನಿಸಿದ್ದಾರೆ.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಆರು ತಿಂಗಳೊಳಗೆ ವೈಟ್ ಟಾಪಿಂಗ್ ಕಾಮಗಾರಿ ಮುಗಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಬೆಂಗಳೂರಿನಲ್ಲಿ ಕಳೆದ ೩೦ ವರ್ಷಗಳಿಂದ ರಸ್ತೆ ಸಮಸ್ಯೆಗೆ ಪರಿಹಾರ ಕಂಡುಹಿಡಿದಿದ್ದರೆ, ಇಂದು ಈ ಪರಿಸ್ಥಿತಿ ಇರುತ್ತಿರಲಿಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ.

---

ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಕರ್ಯ ಅಭಿವೃದ್ಧಿ ನಿಗಮದಿಂದ ಸರ್ಕಾರಕ್ಕೆ ೧೪೩ ಕೋಟಿ ೧೨ ಲಕ್ಷ ರೂಪಾಯಿ ಮೊತ್ತದ ಲಾಭಾಂಶದ ಚೆಕ್ ಅನ್ನು ಸರ್ಕಾರಕ್ಕೆ ಹಸ್ತಾಂತರಿಸಲಾಗಿದೆ.

ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಹಸ್ತಾಂತರಿಸಿದರು.

ಇದೇ ಸಂದರ್ಭದಲ್ಲಿ ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ಮೂರು ಕೋಟಿ ರೂಪಾಯಿ ಮೊತ್ತದ ಚೆಕ್ ನೀಡಲಾಯಿತು.

---

ಪದ್ಮಶ್ರೀ ಪುರಸ್ಕೃತ, ಪುಸ್ತಕ ಪ್ರೇಮಿ ಎಂ ಅಂಕೇಗೌಡ ಅವರ ಸಂಗ್ರಹದಲ್ಲಿರುವ ೨೦ ಲಕ್ಷಕ್ಕೂ ಹೆಚ್ಚಿನ ಪುಸ್ತಕಗಳಿಗೆ ಸೂಕ್ತ ಜಾಗ ಹುಡುಕಿ, ಸುಸಜ್ಜಿತ ಕಟ್ಟಡ ವ್ಯವಸ್ಥೆ ಮಾಡುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್ ಅವರಿಗೆ ಸೂಚನೆ ನೀಡಿದ್ದಾರೆ.

ಮುಖ್ಯಮಂತ್ರಿ ಅವರನ್ನು ವಿಧಾನಸೌಧದಲ್ಲಿ ಇಂದು ಭೇಟಿ ಮಾಡಿದ ಅಂಕೇಗೌಡ ಅವರು ಪುಸ್ತಕಗಳಿಗೆ ಸೂಕ್ತ ವ್ಯವಸ್ಥೆ ಮಾಡುವಂತೆ ಮನವಿ ಮಾಡಿದರು. ಈ ಸಂದರ್ಭದಲ್ಲಿ ಅಂಕೇಗೌಡ ಅವರನ್ನು ಮುಖ್ಯಮಂತ್ರಿ ಸನ್ಮಾನಿಸಿದರು.

ಪಾಂಡವಪುರದಲ್ಲಿ ಅಂಕೇಗೌಡ ಜ್ಞಾನ ಪ್ರತಿಷ್ಠಾನ'ದ ಮೂಲಕ ಬರೋಬ್ಬರಿ ೨೦ ಲಕ್ಷಕ್ಕೂ ಹೆಚ್ಚು ಪುಸ್ತಕಗಳನ್ನು ಸಂಗ್ರಹಿಸಿಡಲಾಗಿದೆ ಎಂದು ಮಾಹಿತಿ ನೀಡಿದರು.

ಇದೇ ವೇಳೆ ತಮ್ಮ ಬಳಿ ಇರುವ ಅಪರೂಪದ ನಾಣ್ಯಗಳು, ಅಂಚೆ ಚೀಟಿಗಳನ್ನು ಮುಖ್ಯಮಂತ್ರಿಯವರಿಗೆ ತೋರಿಸಿ ಅದರ ಬಗ್ಗೆ ಅಂಕೇಗೌಡರು ವಿವರಣೆ ನೀಡಿದರು.

---

ಬೆಂಗಳೂರಿನಲ್ಲಿ ನಡೆದ ಸರ್ಕಾರಿ ಕಾರ್ಯಕ್ರಮವೊಂದರಲ್ಲಿ ಸಂಚಾರ ದಟ್ಟಣೆ ಉಂಟಾದ ಪರಿಣಾಮ ಕೆಲವು ವಿದ್ಯಾರ್ಥಿಗಳು, ನೀಟ್ ಮರು ಪರೀಕ್ಷಾ ಕೇಂದ್ರಗಳನ್ನು ಸಮಯಕ್ಕೆ ಸರಿಯಾಗಿ ತಲುಪಲು ಸಾಧ್ಯವಾಗಲಿಲ್ಲ ಎಂದು ಕೇಂದ್ರ ಬೃಹತ್ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ ಆರೋಪಿಸಿದ್ದಾರೆ.

ಬೆಂಗಳೂರಿನಲ್ಲಿ ಮೂವರು ವಿದ್ಯಾರ್ಥಿಗಳು ನೀಟ್ ಪರೀಕ್ಷೆಗೆ ಗೈರಾಗಲು ಸರ್ಕಾರದ ಕಾರ್ಯಕ್ರಮವೇ ಕಾರಣ ಎಂಬ ಆರೋಪವನ್ನು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಳ್ಳಿಹಾಕಿದ್ದಾರೆ.

ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಪ್ರತಿಕ್ರಿಯಿಸಿ, ಸಂಚಾರ ದಟ್ಟಣೆಯಿಂದ ಯಾವುದೇ ವಿದ್ಯಾರ್ಥಿ ನೀಟ್ ಬರೆಯಲು ತೊಂದರೆ ಅನುಭವಿಸಿದ್ದರೆ, ವಿಷಾದ ವ್ಯಕ್ತಪಡಿಸುವುದಾಗಿ ತಿಳಿಸಿದ್ದಾರೆ. ಇದೇ ವೇಳೆ, ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆಗೆ ಯಾರು ಹೊಣೆ ಎಂದು ಪ್ರಶ್ನಿಸಿದ್ದಾರೆ.

---

ಬೆಂಗಳೂರು ಗ್ರಾಮಾಂತರ ಜಿಲ್ಲೆ ಯಂಟಗಾನಹಳ್ಳಿ ಕೆರೆಗೆ ವೈದ್ಯಕೀಯ ತ್ಯಾಜ್ಯ ಸುರಿದಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಸೂಚನೆ ಮೇರೆಗೆ ಖಾಸಗಿ ಕ್ಲಿನಿಕ್ ವೈದ್ಯರ ವಿರುದ್ಧ ಎಫ್.ಐ.ಆರ್. ದಾಖಲಿಸಲಾಗಿದೆ.

ಯಂಟಗಾನಹಳ್ಳಿ ಗ್ರಾಮಪಂಚಾಯಿತಿಗೆ ಸಚಿವರು ಹಠಾತ್ ಭೇಟಿ ನೀಡಿದ್ದ ವೇಳೆ ಸಾರ್ವಜನಿಕರು ವೈದ್ಯಕೀಯ ತ್ಯಾಜ್ಯವನ್ನು ಕೆರೆಗೆ ಸುರಿದಿರುವ ಬಗ್ಗೆ ಮಾಹಿತಿ ನೀಡಿದ್ದರು. ಕೂಡಲೇ ತಾಲೂಕು ಪಂಚಾಯ್ತಿ ಕಾರ್ಯನಿರ್ವಾಹಕ ಅಧಿಕಾರಿಗೆ ಸ್ಥಳ ಪರಿಶೀಲಿಸಿ, ಕ್ರಿಮಿನಲ್ ಮೊಕದ್ದಮೆ ದಾಖಲಿಸಲು ಸಚಿವರು ಸೂಚಿಸಿದ್ದರು.

---

ದಾವಣಗೆರೆ ಜಿಲ್ಲೆಯಲ್ಲಿ ಶೇಕಡಾ ೫೬ ರಷ್ಟು ಮುಂಗಾರು ಮಳೆ ಕೊರತೆಯಾಗಿದೆ ಎಂದು ಕೃಷಿ ಇಲಾಖೆ ಜಂಟಿ ನಿರ್ದೇಶಕ ಜಿಯಾವುಲ್ಲಾ ತಿಳಿಸಿದ್ದಾರೆ.

ಈ ಕುರಿತು ಮಾಹಿತಿ ನೀಡಿರುವ ಅವರು, ಜಿಲ್ಲೆಯ ಮುಂಗಾರು ಹಂಗಾಮಿನ ಬಿತ್ತನೆ ಗುರಿ ೨ ಲಕ್ಷ ೧೪ ಸಾವಿರ ಹೆಕ್ಟೇರ್ ಆಗಿದ್ದು, ಈಗಾಗಲೇ ಕನಿಷ್ಠ ೫೦ ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಬೇಕಿತ್ತು. ಆದರೆ, ೧೨ ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಮಾತ್ರ ಬಿತ್ತನೆ ಕಾರ್ಯ ನಡೆದಿದೆ ಎಂದು ಮಾಹಿತಿ ನೀಡಿದ್ದಾರೆ.

---

ಮಾವಿಗೆ ಬೆಂಬಲ ಬೆಲೆ ಘೋಷಣೆ ಮಾಡಬೇಕು ಎಂದು ಆಗ್ರಹಿಸಿ ಕರೆ ನೀಡಿದ್ದ, ಕೋಲಾರ ಜಿಲ್ಲಾ ಬಂದ್‌ಗೆ ವಿವಿಧ ಸಂಸ್ಥೆಗಳು, ಮುಖಂಡರು ಬೆಂಬಲ ವ್ಯಕ್ತಪಡಿಸಿದರು.

ನಗರದ ಬಸ್ ನಿಲ್ದಾಣದ ವೃತ್ತದಲ್ಲಿ ಜಮಾಯಿಸಿದ್ದ ರೈತ ಸಂಘಟನೆ ಸದಸ್ಯರು, ರಸ್ತೆಗೆ ಮಾವಿನ ಕಾಯಿ ಸುರಿದು ಸುಮಾರು ಮೂರು ತಾಸಿಗೂ ಅಧಿಕ ಕಾಲ ಪ್ರತಿಭಟನೆ ನಡೆಸಿದರು.

ರೈತರ ನೆರವಿಗೆ ಧಾವಿಸಲು ನಿರ್ಲಕ್ಷ್ಯ ತೋರುತ್ತಿರುವ ಸರ್ಕಾರಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಮುಂದಿನ ೨೪ ಗಂಟೆಗಳಲ್ಲಿ ಸರ್ಕಾರ, ಬೆಂಬಲ ಬೆಲೆ ಘೋಷಣೆ ಮಾಡಿ ಕ್ರಮತೆಗೆದುಕೊಳ್ಳಬೇಕು, ಇಲ್ಲವಾದರೆ, ಜಿಲ್ಲೆಯಲ್ಲಿನ ಎಲ್ಲಾ ಶಾಸಕರ ಮನೆಗಳ ಮುಂದೆ ಮಾವು ಸುರಿದು ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

---

ಬೆಳಗಾವಿಯಲ್ಲಿರುವ ಭಾಷಾ ಅಲ್ಪಸಂಖ್ಯಾತರಿಗೆ ಕಾನೂನಾತ್ಮಕವಾಗಿ ಮರಾಠಿ ಭಾಷೆಯಲ್ಲಿ ಕಾಗದ ಪತ್ರಗಳನ್ನು ನೀಡಬೇಕೆಂದು ಮಹಾರಾಷ್ಟ್ರ ಏಕೀಕರಣ ಸಮಿತಿ ಜಿಲ್ಲಾಡಳಿತವನ್ನು ಆಗ್ರಹಿಸಿದೆ.

ಎಮ್‌ಇಎಸ್ ಕಾರ್ಯಕರ್ತರು, ಮೆರವಣಿಗೆ ಮೂಲಕ ಜಿಲ್ಲಾಧಿಕಾರಿ ಕಚೇರಿಗೆ ಆಗಮಿಸಿ ಮನವಿ ಪತ್ರ ಸಲ್ಲಿಸಿದ್ದಾರೆ.

ಈ ಮಧ್ಯೆ, ಎಂಇಎಸ್ ಕಾರ್ಯಕರ್ತರು ಕನ್ನಡ ಭಾಷಾ ಕಾಗದಪತ್ರವನ್ನು ಹರಿದು ಹಾಕಿರುವುದನ್ನು ಖಂಡಿಸಿ, ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

---

ಇನ್ನು ಸಂಕ್ಷಿಪ್ತ ಸುದ್ದಿ....

- ವಿದ್ಯುತ್ ಖಾಸಗೀಕರಣ ವಿರೋಧಿಸಿ ಹಾಗೂ ಟಾಟಾ ಪವರ್ ಕಂಪನಿಗೆ ವಿದ್ಯುತ್ ವಿತರಣಾ ಪರವಾನಗಿ ನೀಡುವ ಪ್ರಸ್ತಾವನೆ ತಿರಸ್ಕರಿಸಬೇಕೆಂದು ಆಗ್ರಹಿಸಿ ವಿದ್ಯುತ್ ಖಾಸಗೀಕರಣ ವಿರೋಧಿ ಹೋರಾಟ ಸಮಿತಿ ನೇತೃತ್ವದಲ್ಲಿ ಕೋಲಾರದಲ್ಲಿ ಬೃಹತ್ ಪ್ರತಿಭಟನೆ ನಡೆಯಿತು.
- ಕೃಷಿಕರಿಗೆ ಇನ್ನಷ್ಟು ಶಕ್ತಿ, ಆಸಕ್ತಿ, ಪ್ರೋತ್ಸಾಹ ತುಂಬುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಹಲವು ಕೃಷಿ ಹಾಗೂ ರೈತಪರ ಯೋಜನೆಗಳನ್ನು ಹಮ್ಮಿಕೊಂಡಿದ್ದು, ಕೃಷಿಕರು ಅದರ ಲಾಭ ಪಡೆದುಕೊಳ್ಳಬೇಕು ಎಂದು ಉತ್ತರಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಮನವಿ ಮಾಡಿದ್ದಾರೆ.
- ಮಾಹಿತಿ ಹಕ್ಕು ಕಾಯ್ದೆಯಡಿ ಆಯೋಗದ ಬೆಳಗಾವಿ ಪೀಠದಲ್ಲಿ ನಿತ್ಯ ಸುಮಾರು ೬೦ ರಿಂದ ೧೦೦ ಅರ್ಜಿಗಳ ವಿಚಾರಣೆ ಆಫ್ ಲೈನ್ ಹಾಗೂ ಆನ್ ಲೈನ್ ನಲ್ಲಿ ನಡೆಯುತ್ತಿವೆ ಎಂದು ಕರ್ನಾಟಕ ಮಾಹಿತಿ ಆಯೋಗದ ಬೆಳಗಾವಿ ಪೀಠದ ರಾಜ್ಯ ಮಾಹಿತಿ ಆಯುಕ್ತ ಪ್ರಕಾಶ ಚನ್ನಾಳ ತಿಳಿಸಿದ್ದಾರೆ.
- ಪ್ರಧಾನಿ ನರೇಂದ್ರ ಮೋದಿ ಅವರು ಗ್ರಾಮೀಣ ಭಾಗದ ಬಡಜನರ ಆರೋಗ್ಯದ ಹಿತದೃಷ್ಟಿಯಿಂದ ೬೫ ಲಕ್ಷ ರೂಪಾಯಿ ವೆಚ್ಚದಲ್ಲಿ ಆರೋಗ್ಯ ಮಂದಿರಗಳನ್ನು ಮಂಜೂರು ಮಾಡುತ್ತಿದ್ದು, ಚಿಕ್ಕಬಳ್ಳಾಪುರ ಜಿಲ್ಲೆಗೆ ಒಟ್ಟು ೨೪ ಆರೋಗ್ಯ ಮಂದಿರಗಳು ಮಂಜೂರಾಗಿವೆ ಎಂದು ಸಂಸದ ಡಾ.ಕೆ.ಸುಧಾಕರ್ ತಿಳಿಸಿದ್ದಾರೆ.
- ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದ ಮೇರೆಗೆ ಬೆಳಗಾವಿ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ಶೀಘ್ರ ಇತ್ಯರ್ಥಗೊಳಿಸುವ ಉದ್ದೇಶದಿಂದ ಜುಲೈ ೧೧ ರಂದು ರಾಷ್ಟ್ರೀಯ ಲೋಕ ಅದಾಲತ್ ಆಯೋಜಿಸಲಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಸತ್ರ ನ್ಯಾಯಾಧೀಶರಾದ ಎನ್.ವಿ. ವಿಜಯ್ ತಿಳಿಸಿದ್ದಾರೆ.
- ಕೇಂದ್ರ ಸರ್ಕಾರದಪ್ರಧಾನ ಮಂತ್ರಿ ಆವಾಸ್ -ನಗರ ೨.೦ ಯೋಜನೆಯಡಿ ಸರ್ವರಿಗೂ ಸೂರು ಒದಗಿಸುವ ವಸತಿ ಯೋಜನೆಯಡಿ ಚಾಮರಾಜನಗರ ಜಿಲ್ಲೆಯ ಹನೂರು ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ನಿವೇಶನ ರಹಿತರಿಗೆ ನೀಡಲಾಗುವ ಸಹಾಯಧನಕ್ಕೆ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಲು ಜೂನ್ ೩೦ರವರೆಗೆ ಅವಕಾಶ ಕಲ್ಪಿಸಲಾಗಿದೆ.
- ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ಕನ್ನಡ ಜಾಗೃತ ಪರಿಷತ್, ಸಂತಕವಿ ಕನಕದಾಸ ಮತ್ತು ತತ್ವ ಪದಕಾರರ ಅಧ್ಯಯನ ಕೇಂದ್ರದ ವತಿಯಿಂದ ‘ವಚನ ಮತ್ತು ದಾಸ ಸಾಹಿತ್ಯ : ಬಹುಶಿಸ್ತೀಯ ನೋಟ‘ ಕುರಿತ ವಿಚಾರ ಸಂಕಿರಣ ನಡೆಯಿತು.

___________ ಮುಕ್ತಾಯ __________